## 14. ಹಿಂದೂ ಮಹಾಸಾಗರ ವ್ಯಾಪ್ತಿಯಲ್ಲಿ ಭದ್ರತೆ

ಲಡಾಖ್‌ನಲ್ಲಿ ತಿಂಗಳುಗಳಿಂದ ಭಾರತಕ್ಕೆ ಕಿರಿಕಿರಿ ಉಂಟು ಮಾಡಿದ್ದ ಚೀನಾ ಈಗ ದಕ್ಷಿಣದ ಹಿಂದೂ ಮಹಾಸಾಗರದಲ್ಲಿ ತನ್ನ ಅಧಿಪತ್ಯ ಸ್ಥಾಪಿಸಲು ಮುಂದಾಗಿದೆ. ಇದಕ್ಕೆ ಪ್ರತಿಯಾಗಿ ಭಾರತೀಯ ನೌಕಪಡೆ ತನ್ನ ಸಮರ ನೌಕೆಗಳನ್ನು ಹಿಂದೂ ಮಹಾಸಾಗರ ಪ್ರಾಂತ್ಯದಲ್ಲಿ (ಐಒಆರ್) ನಿಯೋಜಿಸಿ, ಚೀನಾಕ್ಕೆ ಸೆಡ್ಡು ಹೊಡೆದಿದೆ.

ಚೀನಾಕ್ಕೆ ಅಮದಾಗುವ ಕಚ್ಚಾ ತೈಲದಲ್ಲಿ ಶೇ.80ರಷ್ಟು ಸರಕು ಹಿಂದೂ ಮಹಾಸಾಗರದ ಮೂಲಕವೇ ಹಾದು ಹೋಗುವುದರಿಂದ ಆ ಸಮುದ್ರ ಭಾಗವನ್ನು ತನ್ನ ವಶಕ್ಕೆ ಪಡೆಯಲು ಚೀನಾ ಹೊಂಚು ಹಾಕುತ್ತಿದೆ. ಐಒಆರ್ ಸೇರಿದಂತೆ ಏಷ್ಯಾ ಖಂಡದ ಸುತ್ತಮುತ್ತಲಿನ ಸಮುದ್ರಗಳ ಮೇಲೆ ತನ್ನ ಸೇನಾ ನೆಲಗಳನ್ನು ನಿರ್ಮಿಸಿ, ನೂತನ ಸಾಗರ ಮಾರ್ಗಗಳನ್ನು ಸೃಷ್ಟಿ ಮಾಡಿಕೊಳ್ಳುವ ಮೂಲಕ ಜಗತ್ತಿನ ಹೊಸ ಸೂಪರ್ ಪವರ್ ಆಗಿ ಹೊರಹೊಮ್ಮಲು ಚೀನಾ ನಿರ್ಧರಿಸಿದೆ. ಮಲಾಕ್ಕಾದ ದಕ್ಷಿಣ ಭಾಗ, ಸುಂಡಾ, ಲೊಂಬೊಕ್, ಒಬಾಯ್ ಹಾಗೂ ವೆಟಾರ್ ಮಾರ್ಗಗಳ ಮೂಲಕ ಹಿಂದೂ ಮಹಾ ಸಾಗರಕ್ಕೆ ಲಗ್ಗೆ ಹಾಕಲು ಚೀನಾ ಯತ್ನಿಸುತ್ತಿದೆ ಎಂದು ಹೇಳಲಾಗಿದೆ.

**ಸಮರನೌಕೆಗಳ ಜಮಾವಣೆ:** ಉದ್ದೇಶವನ್ನು ಅರಿತಿರುವ ಭಾರತೀಯ ನೌಕಪಡೆ, ಹಿಂದೂ ಮಹಾಸಾಗರ ಪ್ರಾಂತ್ಯದಲ್ಲಿ ತನ್ನ ಸಮರ ನೌಕೆಗಳನ್ನು ಜಲಾಂತರ್ಗಾಮಿಗಳ ಕಾವಲು ಆರಂಭಿಸಿದೆ. ಈ ಮೂಲಕ ಚೀನಾಕ್ಕೆ ಎಚ್ಚರಿಕೆಯ ಸಂದೇಶವೊಂದನ್ನು ಭಾರತ ರವಾನಿಸಿದೆ.

ಸಾಗರದ ಮೇಲೆ ಚೀನಾದ ಅತಿಕ್ರಮಣವನ್ನು ತಡೆಯುವ ಉದ್ದೇಶದಿಂದ ಐಒಆರ್‌ನೊಂದಿಗೆ ತಮ್ಮ ತೀರಗಳನ್ನು ಹಂಚಿಕೊಂಡಿರುವ ಮಾಲ್ಡೀವ್ಸ್, ಮಾರಿಷಿಯಸ್, ಸೇಷಲ್ಸ್ ಮಡಗಾಸ್ಕರ್ ರಾಷ್ಟ್ರಗಳನ್ನು ಈಗಾಗಲೇ ಸಂಪರ್ಕಿಸಿರುವ ಭಾರತ ಚೀನಾದ ಪ್ರಯತ್ನಗಳನ್ನು ವಿರೋಧಿಸುವಂತೆ ಕೇಳಿಕೊಂಡಿದೆ. ಜೊತೆಗೆ ಈ ವಿಚಾರದಲ್ಲಿ ಸಮಾನ ಮನಸ್ಕರಾಗಿರುವ ಅಮೆರಿಕ ಹಾಗೂ ಜಪಾನ್‌ನ ನೆರವನ್ನು ಭಾರತ ಕೇಳಿದೆ. ವಿವಾದಿತ ಪ್ರದೇಶವಾದ ದಕ್ಷಿಣ ಚೀನಾ ಸಮುದ್ರದಲ್ಲಿ ಚೀನಾ ಈ ವಿವಾದದ ಪಾಲುದಾರರಾಗಿರುವ ಮಲೇಷ್ಯಾ, ಇಂಡೋನೇಷ್ಯಾ, ಫಿಲಿಪ್ಪೀನ್ಸ್ ಹಾಗೂ ವಿಯೆಟ್ನಾಂ ರಾಷ್ಟ್ರಗಳ ಸತತ ವಿರೋಧದ ನಡುವೆಯೂ ತನ್ನ ನೌಕಾ ದಳದ ಕವಾಯಿತು ನಡೆಸಿದೆ.

ಆಧಾರ:ಉದಯವಾಣಿ, ದಿನಾಂಕ:30.07.2020